ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ

ದಿನಾಂಕ : DATE : 03/07/2019

# ವೈದ್ಯಕೀಯ ಮಂಡಳಿ ತಿದ್ದುಪಡಿ ವಿಧೇಯಕಕ್ಕೆ ಅಸ್ತು

3/7/19

ನವದೆಹಲಿ: ಆರೋಗ್ಯ ಕ್ಷೇತ್ರದಲ್ಲಿ ಸುಧಾರಣೆ ತರುವ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ ಮಂಡಿಸಿದ ವೈದ್ಯಕೀಯ ಮಂಡಳಿ ತಿದ್ದುಪಡಿ ವಿಧೇಯಕಕ್ಕೆ ಧ್ವನಿಮತದ ಒಪ್ಪಿಗೆ ದೊರೆತಿದೆ.

ವಿಧೇಯಕದ ಬಗ್ಗೆ ಮಾತನಾಡಿದ ಆರೋಗ್ಯ ಸಚಿವ ಹರ್ಷವರ್ಧನ್, ವೈದ್ಯಕೀಯ ಕ್ಷೇತ್ರದಲ್ಲಿ ತರಲುದ್ದೇಶಿಸಿರುವ ಮಹತ್ವದ ಸುಧಾರಣೆಗಳಿಗೆ ಇದು ಆರಂಭವಷ್ಟೆ ಎಂದರು. ವೈದ್ಯರಿಕೆ, ಹೊಸ ಕಾಲೇಜುಗಳಿಗೆ ಮತ್ತು ವೈದ್ಯಕೀಯ ಪಠ್ಯ ಕುರಿತು ಮಾನದಂಡ ನಿಗದಿಪಡಿಸಲು 1956ರ ವೈದ್ಯಕೀಯ ಮಂಡಳಿ ಕಾಯ್ದೆಯಡಿ ಭಾರತೀಯ ವೈದ್ಯಕೀಯ ಮಂಡಳಿ ಸ್ಥಾಪಿಸಲಾಗಿದೆ. ಸರ್ಕಾರ ಹೊರಡಿಸಿರುವ ಸುಗ್ರೀವಾಜ್ಞೆಯಂತೆ ಈಗ ವೈದ್ಯಕೀಯ ಮಂಡಳಿ ಬದಲು ಬೋರ್ಡ್ ಆಫ್ ಕೌನ್ಸಿಲ್ ಸ್ಥಾಪಿಸಿದ್ದು, ಇದು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಹರ್ಷವರ್ಧನ್ ಹೇಳಿದರು.

ಕಾಂಗ್ರೆಸ್‌ನ ಅಧೀರ್ ರಂಜನ್ ಚೌಧರಿ, ಡಿಎಂಕೆಯ ಗೌತಮ್ ಸಿಗಮನಿ ಪೊನ್ ವಿಧೇಯಕವನ್ನು ವಿರೋಧಿಸಿದರು. ಟಿಎಂಸಿಯ ಕಾಕೋಳಿ ಘೋಷ್ ದಸ್ತಿದಾರ್ ಮಾತನಾಡಿ, ವೈದ್ಯಕೀಯ ಶಿಕ್ಷಣಕ್ಕೆ 12ನೇ ತರಗತಿ ಫಲಿತಾಂಶವನ್ನಷ್ಟೆ ಪರಿಗಣಿಸಬೇಕು, ಪ್ರತ್ಯೇಕ ಪ್ರವೇಶ ಇರಬಾರದು ಎಂದು ಒತ್ತಾಯಿಸಿದರು.

ವೈದ್ಯಕೀಯ ಶಿಕ್ಷಣದಲ್ಲಿ ಸಮಗ್ರ ಸುಧಾರಣೆ ತರಲು ಶೀಘ್ರವೇ ರಾಷ್ಟ್ರೀಯ ವೈದ್ಯಕೀಯ ಆಯೋಗ ಕಾಯ್ದೆ ತರಲು ಸರ್ಕಾರ ಉದ್ದೇಶಿಸಿದೆ ಎಂದು ಆರೋಗ್ಯ ಸಚಿವ ಹರ್ಷವರ್ಧನ್ ಲೋಕಸಭೆಗೆ ಇದೇ ಸಂದರ್ಭದಲ್ಲಿ ತಿಳಿಸಿದರು.